# ಪ್ರಧಾನಮಂತ್ರಿ ಮತ್ತು ಕೇಂದ್ರ ಸಂಪುಟ ಸಚಿವರ ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ಭಾರತದ ನೆರೆರಾಷ್ಟ್ರಗಳು ಮತ್ತು ಹಿಂದೂ ಮಹಾಸಾಗರ ಪ್ರದೇಶದ ನಾಯಕರು ಭಾಗಿ

ಜೂನ್ 09, 2024

ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಮತ್ತು ಅವರ ಸಂಪುಟ ಸಚಿವರ ಪ್ರಮಾಣ ವಚನ ಸ್ವೀಕಾರ ಸಮಾರಂಭ 2024ರ ಜೂನ್ 09ರಂದು ರಾಷ್ಟ್ರಪತಿ ಭವನದಲ್ಲಿ ನೆರವೇರಿತು. ಭಾರತದ ನೆರೆರಾಷ್ಟ್ರಗಳು ಮತ್ತು ಹಿಂದೂ ಮಹಾಸಾಗರ ಪ್ರದೇಶದ ನಾಯಕರು ಈ ಸಮಾರಂಭದಲ್ಲಿ ಗೌರವಾನ್ವಿತ ಅತಿಥಿಗಳಾಗಿ ಪಾಲ್ಗೊಂಡರು.

2. ಶ್ರೀಲಂಕಾ ಅಧ್ಯಕ್ಷರಾದ ಗೌರವಾನ್ವಿತ ಶ್ರೀ ರನಿಲ್ ವಿಕ್ರಮಸಿಂಘೆ; ಮಾಲ್ಡೀವ್ಸ್ ಅಧ್ಯಕ್ಷರಾದ ಗೌರವಾನ್ವಿತ ಡಾ.ಮೊಹಮ್ಮದ್ ಮುಯಿಜ್ಜು; ಸೆಷೆಲ್ಸ್‌ನ ಉಪಾಧ್ಯಕ್ಷರಾದ ಗೌರವಾನ್ವಿತ ಶ್ರೀ ಅಹ್ಮದ್ ಆಫಿಫ್; ಬಾಂಗ್ಲಾದೇಶದ ಪ್ರಧಾನಮಂತ್ರಿಗಳಾದ ಗೌರವಾನ್ವಿತ ಶೇಖ್ ಹಸೀನಾ; ಮಾರಿಷಿಯಸ್ ಪ್ರಧಾನಮಂತ್ರಿಗಳಾದ ಗೌರವಾನ್ವಿತ ಶ್ರೀ ಪ್ರವಿಂದ್ ಕುಮಾರ್ ಜಗ್ನೌತ್ ಮತ್ತು ಅವರ ಪತ್ನಿ; ನೇಪಾಳದ ಪ್ರಧಾನಮಂತ್ರಿ ಗೌರವಾನ್ವಿತ ಶ್ರೀ ಪುಷ್ಪ ಕಮಲ್ ದಹಲ್ 'ಪ್ರಚಂಡ'; ಮತ್ತು ಭೂತಾನ್ ಪ್ರಧಾನಮಂತ್ರಿಗಳಾದ ಗೌರವಾನ್ವಿತ ಶ್ರೀ ಶೆರಿಂಗ್ ಟೋಬ್ಗೆ ಅವರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ ಗಣ್ಯರು. ಇವರಲ್ಲದೇ, ಮಾಲ್ಡೀವ್ಸ್, ಬಾಂಗ್ಲಾದೇಶ, ನೇಪಾಳ ಮತ್ತು ಭೂತಾನ್‌ನ ನಾಯಕರು ಹಾಗೂ ಸಚಿವರು ಕೂಡ ಸಮಾರಂಭದಲ್ಲಿ ಪಾಲ್ಗೊಂಡಿದ್ದರು.

3. ಪ್ರಮಾಣವಚನ ಸ್ವೀಕಾರ ಸಮಾರಂಭದ ಬಳಿಕ, ದೇಶಕ್ಕೆ ಆಗಮಿಸಿರುವ ಎಲ್ಲ ನಾಯಕರನ್ನು ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿಯವರು ರಾಷ್ಟ್ರಪತಿ ಭವನದಲ್ಲಿ ಭೇಟಿಯಾದರು. ಐತಿಹಾಸಿಕ ಸತತ ಮೂರನೇ ಬಾರಿಗೆ ಪ್ರಧಾನಿಯಾಗಿ ಪ್ರಮಾಣ ಸ್ವೀಕರಿಸಿದ್ದಕ್ಕೆ ಎಲ್ಲ ನಾಯಕರೂ ಮೋದಿಯವರಿಗೆ ಅಭಿನಂದನೆಗಳನ್ನು ಸಲ್ಲಿಸಿದರು. ಸಮಾರಂಭದ ಉಪಸ್ಥಿತಿಗಾಗಿ ಎಲ್ಲ ವಿಶ್ವ ನಾಯಕರಿಗೂ ಧನ್ಯವಾದಗಳನ್ನು ಅರ್ಪಿಸಿದ ಪ್ರಧಾನಮಂತ್ರಿಗಳು, ಭಾರತವು ತನ್ನ 'ನೆರೆರಾಷ್ಟ್ರಗಳೇ ಮೊದಲು' ಎಂಬ ನೀತಿಗೆ ಮತ್ತು 'ಸಾಗರ ಧ್ಯೇಯ'ಕ್ಕೆ ಬದ್ಧವಾಗಿದೆ ಎಂಬುದನ್ನು ಪುನರುಚ್ಚರಿಸಿದರು. 2047ರ ವೇಳೆಗೆ ವಿಕಸಿತ ಭಾರತದ ಗುರಿ ಸಾಧನೆಯತ್ತ ಹೆಜ್ಜೆಯಿಡುವುದರ ಜೊತೆಗೆ, ತಮ್ಮ ಮೂರನೇ ಅವಧಿಯಲ್ಲಿ ಭಾರತವು ವಿವಿಧ ದೇಶಗಳೊಂದಿಗೆ ಆತ್ಮೀಯ ಸಹಭಾಗಿತ್ವದಲ್ಲಿ ಈ ಪ್ರದೇಶದ ಶಾಂತಿ, ಪ್ರಗತಿ ಮತ್ತು ಸಮೃದ್ಧಿಗಾಗಿ ಕೆಲಸ ಮಾಡುವುದನ್ನು ಮುಂದುವರಿಸಲಿದೆ ಎಂದು ಪ್ರಧಾನಮಂತ್ರಿಗಳು ಒತ್ತಿ ಹೇಳಿದರು. ಈ ನಿಟ್ಟಿನಲ್ಲಿ, ಈ ಪ್ರದೇಶದಾದ್ಯಂತ ಜನರ ನಡುವೆ ಆಳವಾದ ಸಂಬಂಧ ಮತ್ತು ಸಂಪರ್ಕ ಬೆಳೆಯಲಿ ಎಂದು ಅವರು ಕರೆ ನೀಡಿದರು. ಅಲ್ಲದೇ, ಭಾರತವು ಅಂತಾರಾಷ್ಟ್ರೀಯ ವೇದಿಕೆಯಲ್ಲಿ ಜಾಗತಿಕ ದಕ್ಷಿಣದ ಧ್ವನಿಯಾಗುವುದನ್ನು ಮುಂದುವರಿಸಲಿದೆ ಎಂದೂ ನುಡಿದರು.

4. ರಾಷ್ಟ್ರಪತಿ ಶ್ರೀಮತಿ ದ್ರೌಪದಿ ಮುರ್ಮು ಅವರು ರಾಷ್ಟ್ರಪತಿ ಭವನದಲ್ಲಿ ಏರ್ಪಡಿಸಿದ್ದ ಔತಣಕೂಟದಲ್ಲೂ ಈ ರಾಷ್ಟ್ರಗಳ ನಾಯಕರು ಪಾಲ್ಗೊಂಡರು. ಅವರೆಲ್ಲರನ್ನೂ ಸ್ವಾಗತಿಸುವುದರ ಜೊತೆಗೆ, ದೇಶದ ಸೇವೆಯಲ್ಲಿ ತೊಡಗಲಿರುವ ಪ್ರಧಾನಮಂತ್ರಿ ನರೇಂದ್ರ ಮೋದಿಯವರಿಗೆ ಶುಭಾಶಯಗಳನ್ನು ಕೋರಿದ ರಾಷ್ಟ್ರಪತಿ ದ್ರೌಪದಿ

ಮುರ್ಮು ಅವರು, ಭಾರತದ ಪ್ರಜಾಸತ್ತಾತ್ಮಕ ಪ್ರಕ್ರಿಯೆಯು ನಮ್ಮ ದೇಶದ ಜನರಿಗಷ್ಟೇ ಹೆಮ್ಮೆಯ ಕ್ಷಣವಲ್ಲ, ಬದಲಿಗೆ ಜಗತ್ತಿನಾದ್ಯಂತ ಇರುವ ಕೋಟ್ಯಂತರ ಮಂದಿಗೂ ಅದು ಸ್ಫೂರ್ತಿ ಎಂದು ಬಣ್ಣಿಸಿದರು.

5. ಪ್ರಧಾನಮಂತ್ರಿ ಮತ್ತು ಕೇಂದ್ರ ಸಂಪುಟದ ಪ್ರಮಾಣ ವಚನ ಸ್ವೀಕಾರದಂಥ ಸ್ಮರಣೀಯ ಸಮಾರಂಭದಲ್ಲಿ ಭಾರತದ ನೆರೆರಾಷ್ಟ್ರಗಳು ಮತ್ತು ಹಿಂದೂ ಮಹಾಸಾಗರ ಪ್ರದೇಶದ ನಾಯಕರ ಪಾಲ್ಗೊಳ್ಳುವಿಕೆಯು, ಈ ಪ್ರದೇಶದಲ್ಲಿ ಭಾರತವು ಹೊಂದಿರುವ ಆಳವಾದ ಸ್ನೇಹ ಮತ್ತು ಸಹಕಾರದ ಬಾಂಧವ್ಯವನ್ನು ಒತ್ತಿಹೇಳಿತು.

**ನವದೆಹಲಿ**
**ಜೂನ್ 09, 2024**